ದಿ: 12.02.2026

**ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 1084/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರಂಗಸ್ವಾಮಿ | ಪ್ರಾ.ಸಾ.6 |
| ತಂದೆಯ/ಗಂಡನ ಹೆಸರು | : | ಮಲ್ಲಯ್ಯ | ಚಾ.ಸಾ.9 |
| ವಯಸ್ಸು | : | 42 ವರ್ಷ | |
| ಕೆಲಸ | : | ಪಿ.ಐ., ಕಾಡುಗೋಡಿ ಪೊಲೀಸ್ ಠಾಣೆ, ಬೆಂಗಳೂರು ನಗರ | ಸಾ ಪ್ರ ಬೋ |
| ವಾಸ | : | ಬೆಂಗಳೂರು | ದಿ:12.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ದಿನಾಂಕ 23.09.2013 ರಿಂದ 17.06.2016 ರವರೆಗೆ ಹೊಳಲ್ಕೆರೆ ಪೊಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 25.02.2015 ರಂದು ರಾತ್ರಿ 9 ಗಂಟೆಗೆ ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ಪಂಚನಾಮೆ, ಮುದ್ದೆಮಾಲು ಮತ್ತು ಆರೋಪಿತನೊಂದಿಗೆ ನೀಡಿದ ವರದಿಯನ್ನು ಸ್ವೀಕರಿಸಿಕೊಂಡು ಠಾಣಾ ಮೊಖದ್ದಮೆ ಸಂಖ್ಯೆ 74/2015 ರಂತೆ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ವರಿದಿ ಮಾಡಿರುತ್ತೇನೆ. ಸಾಕ್ಷಿ ವರದಿಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ.3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ. ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.5 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು. ಅಮಾನತ್ತುಪಡಿಸಿಕೊಂಡ ಮುದ್ದೆಮಾಲನ್ನು ಮಾಲುಪಟ್ಟಿಯಲ್ಲಿ ಅಳವಡಿಸಿ ನ್ಯಾಯಾಲಯಕ್ಕೆ ವರದಿ ಮಾಡಿರುತ್ತೇನೆ. ಆರೋಪಿತನನ್ನು ದಸ್ತಗಿರಿ ಮಾಡಿ, ದಸ್ತಗಿರಿ ಕ್ರಮ ಅನುಸರಿಸಿ ಸಿಬ್ಬಂಧಿಯ ಮೂಲಕ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ದಿ.26.02.2015 ರಂದು ಚಾಸಾ.2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿ.12.03.2015 ರಂದು ಸಾಕ್ಷಿದಾರರಾದ ಚಾಸಾ.7 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿ.11.03.2015 ರಂದು ಅಮಾನತ್ತುಪಡಿಸಿಕೊಂಡ ಮದ್ಯದ ಮಾಲನ್ನು ಅಭಕಾರಿ ಇಲಾಖೆ, ಚಿತ್ರದುರ್ಗ ರವರಿಗೆ ಹಸ್ತಾಂತರಿಸಿ ಆ ಬಗ್ಗೆ ಸ್ವೀಕೃತಿಯನ್ನು ಪಡೆದಿರುತ್ತೇನೆ. ದಿ.18.04.2015 ರಂದು ರಾಸಾಯನಿಕ ಪರೀಕ್ಷಾ ವರದಿಯನ್ನು ಸ್ವೀಕರಿಸಿರುತ್ತೇನೆ. ವರದಿಯನ್ನು ನಿಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು.

ದಿ: 12.02.2026

ಆರೋಪಿತನ ಆರೋಪ ರುಜುವಾತಾದ ಹಿನ್ನಲೆಯಲ್ಲಿ ಆರೋಪಿತನ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿತನನ್ನು ಮತ್ತು ಮು.ಮಾಲನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿತರ ಪರ ಶ್ರೀ ಪಿ.ಎಲ್.ಎಂ. ವಕೀಲರಿಂದ**

3. ಚಾಸಾ.1 ರವರು ನಿಪಿ.1 ರಂತೆ ನಮ್ಮ ಠಾಣೆಯಲ್ಲಿ ವರದಿಯನ್ನು ನೀಡಿರುತ್ತಾರೆ. ಚಾಸಾ.1 ರವರೊಂದಿಗೆ ಅವರ ಸಿಬ್ಬಂಧಿಗಳಾದ ಚಾಸಾ.4 ರಿಂದ 6 ರವರು ಇದ್ದರು. ನಾನು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿಲ್ಲ. ಚಾಸಾ.1 ರವರು ನೀಡಿದ ಸುಳ್ಳು ದೂರಿನ ಆಧಾರದಲ್ಲಿ ಠಾಣಾ ಅಂಕಿ ಸಂಖ್ಯೆಯ ಸಲುವಾಗಿ ಸುಳ್ಳು ಪ್ರಕರಣವನ್ನು ದಾಖಲಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ.2 ರಿಂದ 5 ರವರ ಹೇಳಿಕೆಗಳನ್ನು ನಮ್ಮ ಠಾಣೆಯಲ್ಲಿ ಪಡೆದಿರುತ್ತೇನೆ. ಮು.ಮಾಲುಗಳನ್ನು ರಾಸಾಯನಿಕ ಪರೀಕ್ಷಾ ವರದಿಗೆ ಕಳುಹಿಸುವ ಕಾಲಕ್ಕೆ ಚಾಸಾ.2 ಮತ್ತು 3 ರವರ ಸಹಿ ಇತ್ತು. ಮು.ಮಾಲಿಗೆ ನನ್ನ ಸಹಿ ಇಲ್ಲ. ಅಮಾನತ್ತುಪಡಿಸಿಕೊಂಡ ಮುದ್ದೆಮಾಲಿಗೂ ಮತ್ತು ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ